ಗೃಹಭಾಗ್ಯ ಯೋಜನೆಯಲ್ಲಿ ಅಕ್ರಮದ ವಾಸನೆ?

81.10 ಕೋಟಿ ರು. ಅನುದಾನದಲ್ಲಿ ಭ್ರಷ್ಟಾಚಾರ | ಮನೆಗಳನ್ನೇ ನೀಡದೆ ಅಧಿಕಾರಿಗಳಿಂದ ವಂಚನೆ: ಪ್ರದೀಪ ಅಣಬಿ ಆರೋಪ

• **ಕನ್ನಡಪ್ರಭ ವಾರ್ತೆ** ಯಾದಗಿರಿ

ಕಲ್ಯಾಣ ಕರ್ನಾಟಕ ಭಾಗದ ಆರು ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗಾಗಿ ಜಾರಿಗೆ ತಂದ 'ಗೃಹಭಾಗ್ಯ ಯೋಜನೆ'ಯಡಿ 2022ರಲ್ಲಿ ಬಿಡುಗಡೆಗೊಂಡ ₹81.10 ಕೋಟಿ ಅನುದಾನದಲ್ಲಿ ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಿರುವ ಶಹಾಪುರದ ಸರ್. ಎಂ. ವಿಶ್ವೇಶ್ವರಯ್ಯ ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷರಾದ ಪ್ರದೀಪ ಅಣಬಿ, ಈ ಕುರಿತು ತನಿಖೆ ನಡೆಸಬೇಕು ಎಂದು ಆಗ್ರಹಿಸಿ, ಶಹಾಪುರ ತಹಸೀಲ್ದಾರರಿಗೆ ಮನವಿ ಸಲ್ಲಿಸಿದರು.

ಬೀದರ್, ಕಲಬುರಗಿ, ಯಾದಗಿರಿ, ವಿಜಯನಗರ, ಬಳ್ಳಾರಿ ಮತ್ತು ರಾಯಚೂರು ಜಿಲ್ಲೆಗಳ ಒಟ್ಟು 4055 ಅರ್ಹ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ಮನೆ ನಿರ್ಮಾಣದ ಉದ್ದೇಶದಿಂದ ಈ ಅನುದಾನವನ್ನು ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಮೂಲಕ ಬಿಡುಗಡೆ ಮಾಡಿ, ಜಿಲ್ಲಾವಾರು ಪ್ರತ್ಯೇಕ ಚೆಕ್‌ಗಳ ಮೂಲಕ ಅನುದಾನ ಹಂಚಿಕೆ ಮಾಡಲಾಗಿತ್ತು.



ಗೃಹಭಾಗ್ಯ ಯೋಜನೆಯಡಿ ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಿರುವ ಶಹಾಪುರದ ಸರ್. ಎಂ. ವಿಶ್ವೇಶ್ವರಯ್ಯ ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷರಾದ ಪ್ರದೀಪ ಅಣಬಿ, ಈ ಕುರಿತು ತನಿಖೆ ನಡೆಸಬೇಕು ಎಂದು ಆಗ್ರಹಿಸಿ, ಶಹಾಪುರ ತಹಸೀಲ್ದಾರರಿಗೆ ಮನವಿ ಸಲ್ಲಿಸಿದರು.

ಆದರೆ, ವಾಸ್ತವಿಕ ಪರಿಸ್ಥಿತಿ ಪರಿಶೀಲಿಸಿದಾಗ, ಈ ಯೋಜನೆಯಡಿ ಯಾವುದೇ ಫಲಾನುಭವಿಗಳಿಗೆ ಮನೆಯೇ ಮಂಜೂರಾಗಿಲ್ಲ ಎಂಬ ಆಘಾತಕಾರಿ ಮಾಹಿತಿ ಹೊರಬಿದ್ದಿದೆ ಎಂದು ಆರೋಪಿಸಿರುವ ಪ್ರದೀಪ್, ಮಾಹಿತಿ ಹಕ್ಕು ಅಧಿನಿಯಮ ಮೂಲಕ ವಿವಿಧ ಜಿಲ್ಲಾ ಕಾರ್ಮಿಕ ಅಧಿಕಾರಿಗಳಿಂದ ಪಡೆದ ಮಾಹಿತಿಯ ಪ್ರಕಾರ, ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಯೇ ನಡೆದಿಲ್ಲ ಎಂದು ಸ್ಪಷ್ಟಪಡಿಸಲಾಗಿದೆ. ಇದರಿಂದಾಗಿ ಅನುದಾನದ ಬಳಕೆಯ ಕುರಿತು ಗಂಭೀರ ಅನುಮಾನಗಳು ಮೂಡಿವೆ ಎಂದಿದ್ದಾರೆ.

ಒಟ್ಟು 4055 ಮನೆಗಳ ಪೈಕಿ ಸುಮಾರು 2910 ಮನೆಗಳಿಗೆ ಸಂಬಂಧಿಸಿದ ಮಾಹಿತಿ ಕೇಳಿದಾಗ ಸಮರ್ಪಕ ಉತ್ತರ ದೊರೆಯಲಿಲ್ಲ. ಸರ್. ಎಂ. ವಿಶ್ವೇಶ್ವರಯ್ಯ ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷರಾದ ಪ್ರದೀಪ ಅಣಬಿ, 59 ಕೋಟಿ ರು. ಅನುದಾನ ಬಿಡುಗಡೆಗೊಂಡಿದೆ ಎಂದು ಮಾತ್ರ ತಿಳಿಸಲಾಗಿದೆ. ಉಳಿದ 1145 ಫಲಾನುಭವಿಗಳ ಕುರಿತು ಯಾವುದೇ ಸ್ಪಷ್ಟ ಮಾಹಿತಿ ನೀಡಲಾಗಿಲ್ಲ. ಇದು ಮತ್ತಷ್ಟು ಸಂಶಯಕ್ಕೆ ಕಾರಣವಾಗಿದೆ ಎಂದವರು ಶಂಕೆ ವ್ಯಕ್ತಪಡಿಸಿದ್ದಾರೆ.

ಇದೇ ವಿಷಯವಾಗಿ ಮುಖ್ಯಮಂತ್ರಿಗಳಿಗೆ ಕಾರ್ಮಿಕ ಸಚಿವರಿಗೆ, ವಸತಿ ಸಚಿವರಿಗೆ ಹಾಗೂ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ ಆಯುಕ್ತರು ಸೇರಿದಂತೆ ಹಲವು ಉನ್ನತ ಅಧಿಕಾರಿಗಳಿಗೆ ಮನವಿ ಸಲ್ಲಿಸಲ್ಪಟ್ಟಿದ್ದರೂ, ಇದುವರೆಗೆ ಯಾವುದೇ ಪರಿಣಾಮಕಾರಿ ಕ್ರಮ ಕೈಗೊಳ್ಳದಿರುವುದು ಜನರಲ್ಲಿ ಅಸಮಾಧಾನಕ್ಕೆ ಕಾರಣವಾಗಿದೆ. ಈ ಪ್ರಕರಣದಲ್ಲಿ ಉನ್ನತ ಮಟ್ಟದ ಸ್ವತಂತ್ರ ತನಿಖಾ ತಂಡವನ್ನು ರಚಿಸಿ, ಜಿಲ್ಲಾವಾರು ಅರ್ಜಿಗಳ ಪರಿಶೀಲನೆ, ಫಲಾನುಭವಿಗಳ ಸ್ಥಳ ಪರಿಶೀಲನೆ, ಬ್ಯಾಂಕ್ ವ್ಯವಹಾರಗಳ ಪರಿಶೀಲನೆ ಹಾಗೂ ದಾಖಲೆಗಳ ಸಮಗ್ರ ಪರಿಶೀಲನೆ ನಡೆಸಬೇಕು. ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಪ್ರದೀಪ್ ಆಗ್ರಹಿಸಿದ್ದಾರೆ.

ಈ ಸಂದರ್ಭದಲ್ಲಿ ಆಂಜನೇಯ ಅಣಬಿ, ಅಂಬ್ರೇಶ ಶಿರವಾಳ, ಭೋಜಪ್ಪ ಮುಂಡಾಸ, ಆಂಜನೇಯ ಇಬ್ರಾಹಿಂಪುರ, ಶರಣು ದಿಗ್ಗಿ, ಪ್ರಕಾಶ ದಿಗ್ಗಿ, ಮಲ್ಲಣ್ಣ ಮದ್ರಕಿ ಇನ್ನಿತರ ಸಂಘದ ಸದಸ್ಯರು ಹಾಜರಿದ್ದರು.

ಸುದ್ದಿ ಸಿಂಚನ

ಮೋದೀಜಿ ನಾಯಕತ್ವಕ್ಕೆ ಬಲ: ಕರಣ ಸುಬೇದಾರ



ಕಲಬುರಗಿ: ಪಶ್ಚಿಮ ಬಂಗಾಳ, ಅಸ್ಸಾಂ, ಪುದುಚೇರಿಯಲ್ಲಿ ಬಿಜೆಪಿ ಗೆಲುವು ನರೇಂದ್ರ ಮೋದೀಜಿ ಅವರ ನಾಯಕತ್ವಕ್ಕೆ ದೊಡ್ಡ ಶಕ್ತಿಯನ್ನು ತುಂಬಿದಂತಾಗಿದೆ. ನಮ್ಮ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ಜೀ ಅವರ ಮೊದಲ ಚುನಾವಣೆ ಇದಾಗಿದೆ. ಬಹು ದೊಡ್ಡ ಸಂದೇಶವನ್ನು ನೀಡಿದೆ ಎಂದು ಶಹಾಪೂರ ಮತಕ್ಷೇತ್ರದ ಬಿಜೆಪಿ ಮುಖಂಡ ಕರಣ ಸುಬೇದಾರ ಅವರು ವಿಶ್ಲೇಷಿಸಿದರು. ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿದ ಅವರು, ಇಡೀ ದೇಶದಲ್ಲಿ ಅಮಿತ್ ಶಾ ಜೀ ಅವರು ಚುನಾವಣಾ ಚಾಣಕ್ಯ ಎಂದು ಪ್ರತಿಯೊಬ್ಬರು ಮಾತನಾಡುತ್ತಿದ್ದಾರೆ. ಅಮಿತ್ ಶಾ ಜೀ ಅವರ ತಂತ್ರಗಾರಿಕೆಯೂ ಈ ಗೆಲುವಿನ ಹಿಂದಿದೆ ಎಂದರು. ಪಶ್ಚಿಮ ಬಂಗಾಳದ ಗೆಲುವಿಗಾಗಿ ಅಲ್ಲಿನ ಕಾರ್ಯಕರ್ತರಿಗೆ ನಾವು ಸಲಾಂ ಹೇಳಬೇಕಿದೆ. 3 ರಾಜ್ಯಗಳ ಕಾರ್ಯಕರ್ತರಿಗೆ ಅಭಿನಂದನೆ ತಿಳಿಸುವುದಾಗಿ ಹೇಳಿದರು.

ಬಂಗಾಳದ ವಿಜಯದಲ್ಲಿ ಕನ್ನಡಿಗರ ಪಾತ್ರ ಅನನ್ಯ: ಡಾ. ಶರಣಭೂಪಾಲರೆಡ್ಡಿ



ಯಾದಗಿರಿ: ಪಶ್ಚಿಮ ಬಂಗಾಳ, ಪುದುಚೇರಿ ಹಾಗೂ ಅಸ್ಸಾಂ ವಿಧಾನಸಭಾ ಚುನಾವಣೆಗಳಲ್ಲಿ ಭಾರತೀಯ ಜನತಾ ಪಕ್ಷವು ಅಭೂತಪೂರ್ವ ಗೆಲುವು ಸಾಧಿಸಿರುವುದು ಅತ್ಯಂತ ಸಂತಸದ ವಿಷಯವಾಗಿದೆ. ಅದರಲ್ಲೂ, ಬಂಗಾಳದ ಕಠಿಣ ಚುನಾವಣಾ ಹೋರಾಟದಲ್ಲಿ ನಮ್ಮ ಕರ್ನಾಟಕದ ವಿಧಾನ ಪರಿಷತ್ ಸದಸ್ಯರಾದ ಸಿ. ಟಿ. ರವಿ ಹಾಗೂ ಕಲಬುರಗಿ ವಿಭಾಗದ ನಿಕಟಪೂರ್ವ ಸಂಘಟನಾ ಪ್ರಧಾನ ಕಾರ್ಯದರ್ಶಿಗಳಾದ ಅರುಣ್ ಬಿನ್ನಡಿ ಅವರ ಪ್ರಯತ್ನ ಶ್ಲಾಘನೀಯ ಎಂದು ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಡಾ. ಶರಣಭೂಪಾಲರೆಡ್ಡಿ ನಾಯ್ಕಲ್ ತಿಳಿಸಿದ್ದಾರೆ. ಈ ಕುರಿತು, ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಸಿ. ಟಿ. ರವಿ ಹಾಗೂ ಬಿನ್ನಡಿ ಅವರು ಕಳೆದ ಹಲವು ತಿಂಗಳು ಗಳಿಂದ ಬಂಗಾಳದಲ್ಲಿ ನಿರಂತರ ಪ್ರವಾಸ ಮಾಡಿ, ಚುನಾವಣಾ ತಂತ್ರಗಾರಿಕೆಯನ್ನು ರೂಪಿಸಿ ಯಶಸ್ವಿಯಾ ಗಿದ್ದಾರೆ. ಇವರ ಶ್ರಮಕ್ಕೆ ಇಂದು ವಿಜಯದ ಪುರಸ್ಕಾರ ದೊರೆತಿದೆ. ಈ ಐತಿಹಾಸಿಕ ವಿಜಯಕ್ಕೆ ಕಾರಣರಾದ ಪಕ್ಷದ ಅಭ್ಯರ್ಥಿಗಳಿಗೆ ಹಾಗೂ ರಾಷ್ಟ್ರೀಯ ಹಿತಾಸಕ್ತಿ ಯನ್ನು ಗಮನದಲ್ಲಿಟ್ಟುಕೊಂಡು ಮತ ಚಲಾ ಯಿಸಿದ ಮತದಾರ ಪ್ರಭುಗಳಿಗೆ ಅಭಿನಂದನೆ ಸಲ್ಲಿಸುವುದಾಗಿ ಹೇಳಿದರು. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ನೀವು ನಮಗೆ ಮತ ನೀಡಿ, ನಾವು ನಿಮಗೆ ಸ್ವಾತಂತ್ರ್ಯ ತಂದು ಕೊಡುತ್ತೇವೆ ಎಂದ ಕರೆಗೆ ಜನತೆ ಅಭೂತಪೂರ್ವ ಬೆಂಬಲ ಸೂಚಿಸಿದ್ದಾರೆ. ಕೇಂದ್ರ ಗೃಹ ಸಚಿವರಾದ ಅಮಿತ್ ಶಾ ಅವರ 'ಬಂಗಾಳ ಗೆದ್ದೇ ಸಿದ್ಧ' ಎನ್ನುವ ಶಪಥ ಹಾಗೂ ರಾಷ್ಟ್ರೀಯ ಸಂಘಟನಾ ಪ್ರ ಧಾನ ಕಾರ್ಯದರ್ಶಿಗಳಾದ ಬಿ. ಎಲ್. ಸಂತೋಷ್ ಅ ವರ 'ಬಂಗಾಳದ ಗೆಲುವು ಅಧಿಕಾರಕ್ಕಲ್ಲ, ನಮ್ಮ ನಾಗರಿಕತೆಯ ರಕ್ಷಣೆಗಾಗಿ' ಎಂಬ ಘರ್ಜನೆ ಇಂದು ಸಾಕಾರಗೊಂಡಿದೆ. ಈ ಗೆಲುವಿನ ಹಿಂದಿನ ಶಕ್ತಿಯಾದ ಹಗಲಿರುಳು ಶ್ರಮಿಸಿದ ಪಕ್ಷದ ಲಕ್ಷಾಂತರ ಕಾರ್ಯ ಕರ್ತರಿಗೆ ನಾನು ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದ್ದಾರೆ.

ಎನ್‌ಎಚ್‌ಎಂ: ಗುತ್ತಿಗೆ ಆಧಾರದ ಸಿಬ್ಬಂದಿಗಳ ನೇಮಕಾತಿಗೆ ಅರ್ಜಿ

ಯಾದಗಿರಿ: ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಖಾಲಿಯಿರುವ ಗುತ್ತಿಗೆ ಆಧಾರದ ಸಿಬ್ಬಂದಿಗಳ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಅವರು ತಿಳಿಸಿದ್ದಾರೆ. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಯಾದಗಿರಿ ಜಿಲ್ಲೆಯ ವ್ಯಾಪ್ತಿಯ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಖಾಲಿ ಇರುವ ವಿವಿಧ ಹುದ್ದೆಗಳನ್ನು ರಾಷ್ಟ್ರೀಯ ಆರೋಗ್ಯ ಅಭಿಯಾನದ ನಿಯಮಾನುಸಾರ ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲಾಗುತ್ತಿದ್ದು, ಅರ್ಹ ಅಭ್ಯರ್ಥಿ ಗಳು ಆನ್‌ಲೈನ್ yadgiri.nic.in ನಲ್ಲಿ ಮೇ 20ರ ಒಳಗೆ ಅರ್ಜಿ ಸಲ್ಲಿಸಬೇಕು. ಅರ್ಹ ಅಭ್ಯರ್ಥಿಗಳು ನೇಮಕಾತಿ ಸಂಬಂಧ ಪಟ್ಟಂತೆ ವೆಬ್‌ಸೈಟ್ zpyadgiri.karnataka.gov.in ನಲ್ಲಿ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರತಿಭೆಗಳ ಸೇವೆ ಇಲ್ಲಿನ ಜನರಿಗೆ ಸಿಗಲಿ: ಖಾಸಾಶ್ರೀ

ಬಂಗಾರದ ಪದಕ ಸ್ವೀಕರಿಸಿದ ವೈದ್ಯ ವಿದ್ಯಾರ್ಥಿನಿ ಡಾ. ಶೈಲಶ್ರೀ ನಾಡಗೌಡ ಅವರ ಮನೆಗೆ ತೆರಳಿ ಸನ್ಮಾನ

• **ಕನ್ನಡಪ್ರಭ ವಾರ್ತೆ** ಯಾದಗಿರಿ

ಹಲವಾರು ವರ್ಷಗಳಿಂದ ವಿವಿಧ ಕ್ಷೇತ್ರಗಳಲ್ಲಿ ಇಲ್ಲಿನ ವಿದ್ಯಾರ್ಥಿಗಳು ಅಪಾರ ಸಾಧನೆ ಮಾಡಿ, ಎಲ್ಲರ ಗಮನ ಸೆಳೆದಿದ್ದಾರೆ. ಅವರ ಜ್ಞಾನ, ಪ್ರತಿಭೆ, ಸಾಮಾಜಿಕ ಸೇವೆ ಇಲ್ಲಿನ ಜನರಿಗೆ ಸಿಗುವುದು ಅವಶ್ಯಕವಾಗಿದೆ ಎಂದು ಗುರುಮಠಕಲ್ ಖಾಸಾ ಮಠದ ಪೀಠಾಧಿಪತಿ ಶಾಂತವೀರ ಮಹಾಸ್ವಾಮೀಜಿ ನುಡಿದರು.

ಗಡಿಭಾಗದ ಗುರುಮಠಕಲ್ ತಾಲೂಕಿನ ಯಲ್ಹೇರಿ ಗ್ರಾಮದ ಖ್ಯಾತ ವೈದ್ಯೆ ಡಾ. ನೀಲಮ್ಮ ಎಸ್. ರಡ್ಡಿ ಅವರ ದ್ವಿತೀಯ ಸುಪುತ್ರಿ ವೈದ್ಯ ವಿದ್ಯಾರ್ಥಿನಿ ಡಾ. ಶೈಲಶ್ರೀ ನಾಡಗೌಡ ಅವರು ಮಹಾರಾಷ್ಟ್ರದ ಸಾಂಗ್ಲಿಯ ಭಾರತಿ ವಿದ್ಯಾಪೀಠ ಕಾಲೇಜಿನಲ್ಲಿ ವೈದ್ಯಕೀಯ ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞ ಸ್ನಾತಕೋತ್ತರ (ಪಿಜಿ) ಪರೀಕ್ಷೆಯಲ್ಲಿ ಪುಣೆ ವಿಶ್ವವಿದ್ಯಾನಿಲಯ ವ್ಯಾಪ್ತಿಯಲ್ಲಿಯೇ ಶೇ.79ರಷ್ಟು ಅಂಕಗಳನ್ನು ಪಡೆದು ಬಂಗಾರದ ಪದಕ ಸ್ವೀಕರಿಸಿದ ನಿಮಿತ್ತ ನಗರದ ಅವರ ನಿವಾಸಕ್ಕೆ ತೆರಳಿದ ಶ್ರೀಗಳು ಸಾಧಕಿಯನ್ನು ಸನ್ಮಾನಿಸಿ ಆಶೀರ್ವದಿಸಿ ಮಾತನಾಡಿದರು.

ನಾನು ಹಲವಾರು ವರ್ಷಗಳಿಂದ ಪ್ರಾಮಾಣಿಕವಾಗಿ ಆರೋಗ್ಯ ಇಲಾಖೆಯಲ್ಲಿ ವೈದ್ಯೆಯಾಗಿ ಕೆಲಸ ಮಾಡಿ, ನಿವೃತ್ತಿಯಾದ ಡಾ. ನೀಲಮ್ಮ ಎಸ್. ರಡ್ಡಿ ಅವರ ಕಾರ್ಯವೈಖರಿಯನ್ನು ಗಮನಿಸಿದ್ದೇನೆ, ಅವರು ಕೊರೋನಾ ವೈರಸ್ ದಾಳಿ ಸಂದರ್ಭದಲ್ಲಿ ತಮ್ಮ ಆರೋಗ್ಯ ಲೆಕ್ಕಿಸದೇ ಸಹಸ್ರಾರು ರೋಗಿಗಳಿಗೆ ಹಗಲೂ-ರಾತ್ರಿ ಅವರಿಗೆ ಚಿಕಿತ್ಸೆ ನೀಡಿ, ಹಲವಾರು ರೋಗಿಗಳ ಪ್ರಾಣ ಉಳಿಸಿದ್ದಾರೆ ಎಂದರು.

ಅವರು ಹಲವಾರು ಬಡ ಕುಟುಂಬಗಳಿಗೆ ಕೈಲಾದಷ್ಟು ಆರ್ಥಿಕ ಸಹಾಯ ಮಾಡುವ ಜೊತೆಗೆ ಸಾಮಾಜಿಕ ಕಾರ್ಯಗಳಿಗೆ ತಮ್ಮ ಸಮಯ, ತನು-ಮನ-ಧನ ಅರ್ಪಿಸುವ ಮೂಲಕ ಮಹಿಳೆಯರಲ್ಲಿ ವಿಶೇಷವಾಗಿ ಗುರುತಿಸಿಕೊಂಡಿದ್ದಾರೆ. ಅವರು ಮಾಡಿರುವ ಒಳ್ಳೆಯ ಕೆಲಸಗಳ ಪುಣ್ಯವೇ ಅವರ ಇಬ್ಬರು ಹೆಣ್ಣು ಮಕ್ಕಳು ಪರಿಶ್ರಮದಿಂದ ಓದಿ, ಉನ್ನತ ಗುರಿ ತಲುಪಿ ಸಾರ್ವಜನಿಕ ಸೇವೆಯಲ್ಲಿ ತೊಡಗಿರುವುದು ಸಂತಸದ ವಿಷಯ ಎಂದು ಶ್ಲಾಘಿಸಿದರು.



ಯಾದಗಿರಿಯ ಖ್ಯಾತ ವೈದ್ಯೆ ಡಾ. ನೀಲಮ್ಮ ಎಸ್. ರಡ್ಡಿ ಅವರ ದ್ವಿತೀಯ ಸುಪುತ್ರಿ ವೈದ್ಯ ವಿದ್ಯಾರ್ಥಿನಿ ಡಾ. ಶೈಲಶ್ರೀ ನಾಡಗೌಡ ಅವರ ನಿವಾಸಕ್ಕೆ ಗುರುಮಠಕಲ್ ಖಾಸಾ ಮಠದ ಶಾಂತವೀರ ಮಹಾಸ್ವಾಮೀಜಿ ತೆರಳಿ ಸನ್ಮಾನಿಸಿದರು.

ಪ್ರಸಕ್ತ ದಿನಗಳಲ್ಲಿ ನಮ್ಮ ಜಿಲ್ಲೆಯ ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರದಲ್ಲಿ ಇನ್ನೂ ಬದಲಾವಣೆ ಸಾಧಿಸುವುದು ಅಗತ್ಯವಾಗಿದೆ, ಹೆಚ್ಚಾಗಿ ಇಲ್ಲಿನ ರೋಗಿಗಳು ಚಿಕಿತ್ಸೆಗಾಗಿ ಬೇರೆ ಕಡೆ ತೆರಳುವುದು ಸಾಮಾನ್ಯವಾಗಿದೆ, ವೈದ್ಯಕೀಯ ಕ್ಷೇತ್ರಗಳಲ್ಲಿ ಅಭ್ಯಾಸ ಮಾಡುವುದು ಎಲ್ಲರಿಗೂ ಸವಾಲಾಗಿದೆ, ಅಂದ ಮಾತ್ರಕ್ಕೆ ಹೆಚ್ಚಿನ ಹಣ ಗಳಿಸುವ ಉದ್ದೇಶದೊಂದಿಗೆ ಬೃಹತ್ ನಗರಗಳಿಗೆ ಪ್ರತಿಭೆಗಳು ಪಲಾಯನ ಮಾಡುವುದು ಸರಿಯಾದ ಕ್ರಮವಲ್ಲ, ಇದು ನನ್ನ ಅಭಿಪ್ರಾಯ, ನಿಮ್ಮ ಜ್ಞಾನ, ಅನುಭವ, ಸೇವೆ ಈ ಭಾಗದ ಜನರಿಗೆ ನೀಡಿದಾಗ ಮಾತ್ರ ನಿಮಗೆ ಆತ್ಮತೃಪ್ತಿ ಸಿಗುವ ಜೊತೆಗೆ ಗೌರವ ಕೂಡ ಹೆಚ್ಚಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಶ್ರೀಗಳಿಂದ ಆಶೀರ್ವಾದ ಪಡೆದ ಡಾ. ಶೈಲಶ್ರೀ ನಾಡಗೌಡ, ನಾನು ನಮ್ಮ ತಾಯಿ, ಗುರು-ಹಿರಿಯರ ಆಶೀರ್ವಾದದಿಂದ ಈ ಸ್ಥಾನಕ್ಕೆ ಬಂದಿದ್ದೇನೆ, ನಿಮ್ಮೆಲ್ಲರ ಆಶಯದಂತೆ ನಾವೂ ಇಲ್ಲಿಯೇ ಬಡ ಜನರಿಗೆ ಗುಣಮಟ್ಟದ ವೈದ್ಯಕೀಯ ಸೇವೆ ನೀಡಲು ನಿರ್ಧರಿಸಿ ಕೆಲಸ ಆರಂಭಿಸಿದ್ದೇವೆ ಎಂದು ತಿಳಿಸಿದರು.

ಶ್ರೀಗಳ ಜೊತೆ ಪೂಜ್ಯಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ ಜನವಾಡ ಬೆಳಗಾವಿ ಜಿಲ್ಲೆ, ಜಿ.ಪಂ ಮಾಜಿ ಸದಸ್ಯ ಶ್ರೀನಿವಾಸರಡ್ಡಿ ಪಾಟೀಲ್ ಚೆನ್ನೂರ, ವೈದ್ಯೆ ಡಾ. ನೀಲಮ್ಮ ಎಸ್. ರಡ್ಡಿ ಯಲ್ಹೇರಿ, ಸೋಮಶೇಖರ ಮಣ್ಣೂರ, ಡಾ. ಸುನೀಲ್ ಪಾಟೀಲ್, ಡಾ. ಭಾಗ್ಯಶ್ರೀ ಎಸ್. ಪಾಟೀಲ್, ನಿಜಗುಣಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಜನಪರ ಯೋಜನೆಗಳಿಗೆ ಸಂದ ಜಯ: ಚೆನ್ನಾರೆಡ್ಡಿ ಪಾಟೀಲ್

ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವು: ಹರ್ಷ

• **ಕನ್ನಡಪ್ರಭ ವಾರ್ತೆ** ಯಾದಗಿರಿ



ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ವಿಧಾನಸಭೆಯ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳು ಜಯಭೇರಿ ಬಾರಿಸಿದ್ದು, ಈ ಜಯವು ನಮ್ಮ ಸರ್ಕಾರದ ಜನಪರ ಯೋಜನೆಗಳಿಗೆ ಹಾಗೂ ಕಾರ್ಯಕರ್ತರ ಅವಿರತ ಶ್ರಮಕ್ಕೆ ಸಂದ ಜಯವಾಗಿದೆ ಎಂದು ಯಾದಗಿರಿ ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರ ಹೇಳಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, ದಾವಣಗೆರೆ ದಕ್ಷಿಣದಿಂದ ಆಯ್ಕೆಯಾದ ಸಮರ್ಥ ಶಾಮನೂರ ಅವರ ಅಜ್ಜ ಶ್ಯಾಮನೂರ ಶಿವಶಂಕರಪ್ಪ ಅವರ ಸಿಂಹಾಸನವನ್ನು ಅಲಂಕರಿಸುವ ಮೂಲಕ ಅತ್ಯಂತ ಚಿಕ್ಕ ವಯಸ್ಸಿನ ಶಾಸಕರಾಗಿದ್ದಾರೆ. ಉಮೇಶ್ ಮೇಟಿ ಅವರು ಆಯ್ಕೆ ಆಗುವ ಮೂಲಕ ಅವರ ತಂದೆಯ ವರ್ಚಸ್ಸು, ಕಾಂಗ್ರೆಸ್ ಪಕ್ಷ ಕ್ಷೇತ್ರದಲ್ಲಿ ಇನ್ನಷ್ಟೂ ಗಟ್ಟಿಯಾಗಿದೆ ಎನ್ನುವುದು ಸಾಬೀತು ಮಾಡಿದ್ದಾರೆ ಎಂದಿದ್ದಾರೆ.

ಉಭಯ ಕ್ಷೇತ್ರದಲ್ಲಿ ಆ ಕುಟುಂಬ ಸದಸ್ಯರ ಒಮ್ಮತದ ಪ್ರಚಾರ, ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ಆಕರ್ಷಿತರಾದ ಮಹಿಳಾ ಮತದಾರರ ಭಾರಿ ಬೆಂಬಲ ದೊರೆತಿದೆ. ಜೊತೆಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರ ಜನಪರ ಕಾಳಜಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಅವರ ಸಾರಥ್ಯವನ್ನು ಬೆಂಬಲಿಸಿದ್ದಾರೆ.

ಈ ಕ್ಷೇತ್ರಗಳಲ್ಲಿಯ ಭರ್ಜರಿ ಗೆಲುವಿನ ಯಶಸ್ಸು ರಾಜ್ಯ ಸರ್ಕಾರಕ್ಕೆ ಸಲ್ಲುತ್ತದೆ. ಆಡಳಿತ ಪಕ್ಷದ ವರ್ಚಸ್ಸು, ವ್ಯವಸ್ಥಿತ ರಾಜಕೀಯ ತಂತ್ರಗಾರಿಕೆ, ಗ್ಯಾರಂಟಿ ಯೋಜನೆಗಳು ಕೈ ಹಿಡಿದಿವೆ. ಮೂರು ವರ್ಷ ಕಳೆದರೂ ವಿಪಕ್ಷಗಳು ಎಷ್ಟೇ ಬೊಬ್ಬೆ ಹಾಕಿದರೂ ಜನರು ಪಕ್ಷವನ್ನು ಆಶೀರ್ವದಿಸಿದ್ದು, ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಗೆ ಮುಖಭಂಗವಾಗಿದೆ ಎಂದಿದ್ದಾರೆ.

ಕರ್ನಾಟಕದಲ್ಲಿ ಗ್ಯಾರಂಟಿ ಯೋಜನೆಗಳು ನಮ್ಮ ಕೈ ಹಿಡಿದಿವೆ. ಜನರ ಕಷ್ಟಕ್ಕೆ ನಮ್ಮ ಸರ್ಕಾರ ಸ್ಪಂದಿಸಿದೆ. ಹೀಗಾಗಿ ಉಪ ಸಮರದಲ್ಲಿ ಉತ್ತಮ ಫಲಿತಾಂಶ ಬಂದಿದೆ. ಈ ಉಪ ಚುನಾವಣೆ ಫಲಿತಾಂಶ ಮುಂದಿನ 2028ರ ವಿಧಾನಸಭೆ ಫಲಿತಾಂಶಕ್ಕೆ ದಿಕ್ಸೂಚಿಯಾಗಿದ್ದು, ರಾಜ್ಯದಲ್ಲಿ ನಮ್ಮ ಸರ್ಕಾರ ಮತ್ತೆ ಅಧಿಕಾರಕ್ಕೆ ಬರುವಲ್ಲಿ ಸಂಶಯವಿಲ್ಲ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಅಭಿವೃದ್ಧಿಯಿಂದ ಉಪ ಚುನಾವಣೇಲಿ ಜಯ



ಯಾದಗಿರಿ: ಬಾಗಲಕೋಟೆ ವಿಧಾನಸಭೆ ಕ್ಷೇತ್ರದ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಮತ್ತು ದಾವಣಗೆರೆ ದಕ್ಷಿಣ ಕ್ಷೇತ್ರದ ಅಭ್ಯರ್ಥಿ ಸಮರ್ಥ ಶಾಮನೂರು ಅವರ ಗೆಲುವು ನಾಡಿನ ಅಭಿವೃದ್ಧಿಗೆ ದೊರೆತ ದೊಡ್ಡ ಜಯವಾಗಿದೆ ಎಂದು ಕೆಪಿಸಿಸಿ ಪ್ರಚಾರ ಸಮಿತಿ ರಾಜ್ಯ ಉಪಾಧ್ಯಕ್ಷ ಡಾ. ಭೀಮಣ್ಣ ಮೇಟಿ ಹೇಳಿದರು. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಉತ್ತಮವಾಗಿ ಆಡಳಿತ ನೀಡುತ್ತಿರುವ ಪರಿಣಾಮವಾಗಿ ಮತ್ತೊಮ್ಮೆ ಮತದಾರರು ಆಶೀರ್ವಾದ ಮಾಡಿದ್ದಾರೆ.

ಬಾಗಲ ಕೋಟೆ ವಿಧಾನಸಭೆ ಕ್ಷೇತ್ರದ ಉಪ ಚುನಾವಣೆಯಲ್ಲಿ ನಾನು ಮೂರು ವಾರಗಳ ಕಾಲ ಪ್ರಚಾರ ಮಾಡಿದ್ದೇನೆ. ನನಗೆ ಕಮತಗಿ ಪಟ್ಟಣ ಪಂಚಾಯಿತಿ ಮತ್ತು ಬೇವೂರು ಜಿಲ್ಲಾ ಪಂಚಾಯಿತಿ ಜವಾಬ್ದಾರಿ ಕೊಟ್ಟಿದ್ದರು. ಸಚಿವ ಸತೀಶ್ ಜಾರಕಿಹೊಳಿ ಅವರ ನೇತೃತ್ವದಲ್ಲಿ ಚುನಾವಣೆಯಲ್ಲಿ ಗೆಲುವು ಸಾಧಿಸಿದ್ದೇವೆ ಎಂದು ತಿಳಿಸಿದರು. ಗ್ಯಾರಂಟಿ ಯೋಜನೆಗಳನ್ನು ನಾಡಿನಲ್ಲಿ ಸಮರ್ಥವಾಗಿ ಜಾರಿಗೊಳಿ ಸಲಾಗಿದೆ. ಸರ್ವ ಸಮುದಾಯದ ಹಿತವನ್ನು ರಾಜ್ಯ ಸರಕಾರ ಕಾಪಾಡುತ್ತಿದೆ. ಹೀಗಾಗಿಯೇ ಉಪ ಚುನಾ ವಣೆಯಲ್ಲಿ ಕಾಂಗ್ರೆಸ್ಸಿಗೆ ಸುಲಭವಾಗಿ ಗೆಲುವು ಸಿಕ್ಕಿದೆ ಎಂದು ಹೇಳಿದರು.

ದೇಶದ ಪ್ರಗತಿಗೆ ಯುವಶಕ್ತಿಯ ಕೊಡುಗೆ ಅತ್ಯವಶ್ಯ

ಶರಣಪ್ಪ ಮಾನೇಗಾರ ಅಭಿಮತ | ಕಿಲ್ಲನಕೇರಾ ಪ್ರೀಮಿಯರ್‌ಲೀಗ್ ಕ್ರಿಕೆಟ್ ಪಂದ್ಯಾವಳಿಗೆ ಚಾಲನೆ

• **ಕನ್ನಡಪ್ರಭ ವಾರ್ತೆ** ಯಾದಗಿರಿ

ನಮ್ಮ ರಾಜ್ಯ, ರಾಷ್ಟ್ರದ ಪ್ರಗತಿಗೆ ಯುವ ಶಕ್ತಿಯ ಕೊಡುಗೆ ಅತ್ಯವಶ್ಯವಾಗಿದೆ ಎಂದು ಹಿಂದುಳಿದ ವರ್ಗಗಳ ಆಯೋಗದ ಮಾಜಿ ಸದಸ್ಯ ಹಾಗೂ ಕಾಂಗ್ರೆಸ್ ಮುಖಂಡರಾದ ಶರಣಪ್ಪ ಮಾನೇಗಾರ ಅವರು ತಿಳಿಸಿದರು.

ಯಾದಗಿರಿ ತಾಲೂಕಿನ ಕಿಲ್ಲನಕೇರಾ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಕಿಲ್ಲನಕೇರಾ ಪ್ರೀಮಿಯರ್‌ಲೀಗ್ ಸೀಸನ್ ನಾಲ್ಕರ ಕ್ರಿಕೆಟ್ ಪಂದ್ಯಾವಳಿಗೆ ಚಾಲನೆ ನೀಡಿ ಮಾತನಾಡಿ, ಯುವಕರು ಈ ರಾಷ್ಟ್ರದ ಸಂಪತ್ತು, ಅವರನ್ನು ಬೆನ್ನುತಟ್ಟಿ ಬೆಂಬಲಿಸಿ ಪ್ರೋತ್ಸಾಹಿಸುವುದು ನಮ್ಮ ಆದ್ಯ ಕರ್ತವ್ಯ, ಈ ನಿಟ್ಟಿನಲ್ಲಿ ಗುರುಮಠಕಲ್ ಮತಕ್ಷೇತ್ರದಲ್ಲಿ ಯುವಕರು ಮಾಡುವ ಪ್ರತಿಯೊಂದು ಸಮಾಜಮುಖಿ ಕೆಲಸ ಕಾರ್ಯಗಳಿಗೆ ಸಹಾಯ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಕ್ರೀಡೆ ಮಾನವನ ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕೆ ತುಂಬಾ ಸಹಕಾರಿಯಾಗಿದೆ. ಕ್ರೀಡೆಯಲ್ಲಿ ಭಾಗವಹಿಸುವುದರಿಂದ ಪರಸ್ಪರ ಪರಿಚಯ ಪ್ರೀತಿ, ವಿಶ್ವಾಸ ಮತ್ತು ಸೌಹಾರ್ದತೆ ಬೆಳೆಯುತ್ತದೆ. ಈ ನಿಟ್ಟಿನಲ್ಲಿ ಕ್ರೀಡಾಪಟುಗಳು ಯಾವುದೇ ರೀತಿಯ ಅನವಶ್ಯಕ ಗೊಂದಲಗಳಿಗೆ ಅವಕಾಶ ನೀಡದೆ ಕ್ರೀಡಾ ನಿಯಮಗಳಿಗೆ ಬದ್ಧರಾಗಿರಬೇಕು ಎಂದು ಕಿವಿ ಮಾತು ಹೇಳಿದರು.

ಹಾರ ತುರಾಯಿಗೆ ಗುಡ್ ಬೈ: ಕಿಲ್ಲನಕೇರಾ ಗ್ರಾಮದಲ್ಲಿ ಶುಕ್ರವಾರ ಆಯೋಜನೆ ಮಾಡಿದ್ದ ಕೆಪಿಎಲ್ ಸೀಸನ್ - 4ರ ಉದ್ಘಾಟನಾ ಕಾರ್ಯಕ್ರಮಕ್ಕೆ ಆಗಮಿಸಿದ್ದ ಗಣ್ಯರಿಗೆ ಹಾರ ತುರಾಯಿ ಬದಲಿಗೆ ಬಸವಣ್ಣನವರ ಪುಸ್ತಕ ಹಾಗೂ ಗುಲಾಬಿ ಹೂ ನೀಡಿ ಗೌರವಿಸಲಾಯಿತು. ಇದಲ್ಲದೆ ಹಾರ ತುರಾಯಿಗೆ ಖರ್ಚು ಮಾಡಬೇಕಿದ್ದ ಹಣವನ್ನು ಗ್ರಾಮದ ಅಶಕ್ತ ವ್ಯಕ್ತಿ ಖಾಸಿಂ ಅವರಿಗೆ ಆರ್ಥಿಕ ನೆರವು ನೀಡುವ ಮೂಲಕ ಸಾರ್ಥಕತೆ ಮೆರೆಯಲಾಯಿತು.



ಈ ಸಂದರ್ಭದಲ್ಲಿ ಕೆಪಿಸಿಸಿ ಸದಸ್ಯ ಚಂದ್ರಶೇಖರ ವಾರದ, ಮಾಜಿ ಬ್ಲಾಕ್ ಕಾಂಗ್ರೆಸ್ ವಿಶ್ವನಾಥ ನೀಲಹಳ್ಳಿ, ಅನಿಲಕುಮಾರ ಹೆಡಗಿಮದ್ರಾ, ಬಂದಪ್ಪಗೌಡ ಲಿಂಗೇರಿ, ವೀರಯ್ಯ ಸ್ವಾಮಿ ಹೀರೆನೂರ್, ಅಮೀನರೆಡ್ಡಿ ಗೌಡಗೇರಾ, ರಘುಪತಿ ಗೌಡಗೇರಾ, ವೆಂಕಟೇಶ ಕೂಡಲೂರು ವಿಜಯಮಲ್ಯ, ಕೋಲಿ ಸಮಾಜ ಸೈದಾಪೂರ ವಲಯ ಅಧ್ಯಕ್ಷ ರಮೇಶ ಭೀಮನಳ್ಳಿ, ರಾಮಣ್ಣ ಗೌಡಗೇರಾ, ಮರೆಪ್ಪ ಗೌಡಗೇರಾ, ಅಂಬಣ್ಣ ಗೌಡಗೇರಾ, ಮರೆಪ್ಪ ಗೌಡಗೇರಾ, ಸಾಹೇಬಗೌಡ ಗೌಡಗೇರಾ, ಜೈರಾಮ್ ಗೌಡಗೇರಾ ತಾಂಡ, ಹಣಮಂತ ದೊಡ್ಮನಿ, ದೇವಪ್ಪಗೌಡ, ಜಗದೀಶ ಸಜ್ಜನ್, ಈರಣ್ಣಗೌಡ ಯರಗೋಳ, ವಿರೇಶ ಸಜ್ಜನ್, ವಿಜಯ ಕಂದಳ್ಳಿ, ಆಂಜನೇಯ ರಾಂಪೂರ, ವೆಂಕಟೇಶ ಕೂಡಲೂರು, ಸಿದ್ದಪ್ಪಗೌಡ, ರಾಜುಗೌಡ, ವೆಂಕಟೇಶ ಯಾದವ್ ಬದ್ದೆಪಲ್ಲಿ, ವಿನಯ್, ಭೀಮರೆಡ್ಡಿ ಶೆಟ್ಟಿಗೇರಾ, ಮಲ್ಲಿಕಾರ್ಜುನ ಮಾಲಿ ಪಾಟೀಲ, ಅಬ್ದುಲ್ ಅತ್ತಾರ್, ಬನ್ನಪ್ಪ ಬಾವೂರ ಮಸಾಲಿ, ಶಿವಶರಣ ವಕೀಲರು ಯಾದಗಿರಿ, ವೆಂಕಟೇಶ ಅಗಸಿಮುಂದಳ್, ಭೀಮರಾಯ ಧೋತ್ರೆ, ಹುಸೇನ್ ಫೈಲ್, ಹಣಮಂತ ಬಾವೂರ ನೀಲಿ, ಬಸವರಾಜ ಗ್ಯಾರೇಜ್, ಪಿಲಿಂಗ ಅಂಬಿಗೇರ್ ಬಾವೂರ, ಪವನ ದಳಪತಿ, ಭೀಮರಾಯ ಟೆಂಗಿನಗಿಡ, ಯಂಕಪ್ಪ ಟ್ರ್ಯಾಕ್ಟರ್, ಬೀರಲಿಂಗಪ್ಪ ಕಿಲ್ಲನಕೇರಾ, ಸೈದಪ್ಪ ಬಾಂಬೆ ಗೌಡಗೇರಾ, ಉಮೇಶ ಧೋತ್ರೆ ಇದ್ದರು.

ಅಭಿನಂದನೆ

ಸುರಪುರ: ಒಟ್ಟು 320 ಮತದಾರರಲ್ಲಿ 283 ಮಂದಿ ಮತದಾನದಲ್ಲಿ ಭಾಗಿ | ಶೇ.88ಕ್ಕೂ ಅಧಿಕ ಮತದಾನ

ಶಿಕ್ಷಕರ ಸಂಘದ ಚುನಾವಣೆ: ಸೋಮರೆಡ್ಡಿ, ಚೆನ್ನಮ್ಮಗೆ ಗೆಲುವು

• **ಕನ್ನಡಪ್ರಭ ವಾರ್ತೆ** ಸುರಪುರ

ತಾಲೂಕಿನ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ 2026-31ನೇ ಸಾಲಿನ ತಾಲೂಕು ಘಟಕದ ಕಾರ್ಯಕಾರಿ ಸಮಿತಿಗೆ ಮೇ 1 ಶುಕ್ರವಾರದಂದು ನಡೆದ ಚುನಾವಣೆಯಲ್ಲಿ ಸೋಮರೆಡ್ಡಿ ಮಂಗಿಹಾಳ ಮತ್ತು ಚೆನ್ನಮ್ಮ ದೇವಿಂದ್ರರಡ್ಡಿ ಅವರು ಗೆಲುವು ಸಾಧಿಸಿದ್ದಾರೆ.

ಚುನಾವಣೆಯು ಶಾಂತಿಯುತವಾಗಿ ನಡೆಯಿತು. ಬೆಳಿಗ್ಗೆ 8.30ಕ್ಕೆ ಆರಂಭವಾದ ಮತದಾನ ಪ್ರಕ್ರಿಯೆಯಲ್ಲಿ ತಾಲೂಕಿನ ವಿವಿಧ ಭಾಗಗಳಿಂದ ಆಗಮಿಸಿದ್ದ ಶಿಕ್ಷಕರು ಸಂಜೆ 4.30ರವರೆಗೆ ಮತ ಚಲಾಯಿಸಿದರು. ಒಟ್ಟು 320 ಮತದಾರರಲ್ಲಿ 283 ಮಂದಿ ಮತದಾನದಲ್ಲಿ ಭಾಗವಹಿಸಿದ್ದು, ಶೇ.88ಕ್ಕೂ ಅಧಿಕ ಮತದಾನ ದಾಖಲಾಗಿದೆ.

ಒಟ್ಟು 7 ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ, ಎರಡು ಗುಂಪುಗಳಿಂದ ಪುರುಷರ ವಿಭಾಗದ 5 ಸ್ಥಾನಗಳಿಗೆ 11 ಅಭ್ಯರ್ಥಿಗಳು ಮತ್ತು ಮಹಿಳಾ ವಿಭಾಗದ 2 ಸ್ಥಾನಗಳಿಗೆ 3 ಅಭ್ಯರ್ಥಿಗಳು ಸ್ಪರ್ಧಿಸಿದ್ದರು. ಅಂತಿಮವಾಗಿ ಎಲ್ಲಾ 7 ಸ್ಥಾನಗಳಿಗೆ ಅಭ್ಯರ್ಥಿಗಳು ಆಯ್ಕೆಯಾಗಿದ್ದಾರೆ. ಸಂಜೆ 6.30ಕ್ಕೆ ಆರಂಭವಾದ ಮತ ಎಣಿಕೆ ಪ್ರಕ್ರಿಯೆಯಲ್ಲಿ ಪುರುಷರ ವಿಭಾಗದಲ್ಲಿ ಸೋಮರೆಡ್ಡಿ ಮಂಗಿಹಾಳ 179 ಮತಗಳನ್ನು ಪಡೆದು ಅಗ್ರಸ್ಥಾನ ಪಡೆದರು.



ಸುರಪುರದ ತಾಲೂಕು ನೌಕರರ ಸಂಘದ ಕಚೇರಿಯಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಚುನಾವಣೆಯಲ್ಲಿ ವಿಜೇತರಾದ ಅಭ್ಯರ್ಥಿಗಳಿಗೆ ಪ್ರಮಾಣಪತ್ರ ನೀಡಿ ಗೌರವಿಸಲಾಯಿತು.

ಇವರೊಂದಿಗೆ ಶರಣಬಸವ ಗೋನಾಲ್ 168, ದೇವರಾಜ್ ಪಾಟೀಲ್ 136, ಗೋವಿಂದಪ್ಪ ತನಿಕೇದಾರ 129 ಹಾಗೂ ಲಚಮಣ್ಣ ವನದುರ್ಗ 122 ಮತಗಳನ್ನು ಪಡೆದು ಆಯ್ಕೆಯಾದರು. ಮಹಿಳಾ ವಿಭಾಗದಲ್ಲಿ ಚೆನ್ನಮ್ಮ ದೇವಿಂದ್ರರಡ್ಡಿ ಅವರು 199 ಮತಗಳನ್ನು ಪಡೆದು ಭರ್ಜರಿ ಗೆಲುವು ಸಾಧಿಸಿದರೆ, ನೀಲಮ್ಮ ಬಸವರಾಜ್ ಅವರು 131 ಮತಗಳನ್ನು ಪಡೆದು ಜಯಗಳಿಸಿದ್ದಾರೆ. ಚುನಾವಣಾಧಿಕಾರಿ ಭೀಮರಾಯ ಎಚ್. ಗೋನಾಲ್ ಹಾಗೂ ಸಹಾಯಕ ಚುನಾವಣಾಧಿಕಾರಿ ಸಿದ್ದಣ್ಣ ಹೊಸಗೌಡ್ರು ಅವರು ಪ್ರಕ್ರಿಯೆಯನ್ನು ಸುಗಮವಾಗಿ ನಡೆಸಿದರು. ವಿಜೇತ ಅಭ್ಯರ್ಥಿಗಳಿಗೆ ಚುನಾವಣಾಧಿಕಾರಿಗಳು ಪ್ರಮಾಣ ಪತ್ರ ವಿತರಿಸಿ, ಅಭಿನಂದಿಸಿದರು.

ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ರಾಮಕೃಷ್ಣ ಕಲಬುರ್ಗಿ, ಮಹಾಂತೇಶ ಗೋನಾಲ ಸೇರಿದಂತೆ ಶಿಕ್ಷಕರು ಉಪಸ್ಥಿತರಿದ್ದರು.

ಹುಣಸಗಿ: ಶಿಕ್ಷಕರ ಸಂಘಕ್ಕೆ ಪದಾಧಿಕಾರಿಗಳ ಆಯ್ಕೆ



ಹುಣಸಗಿ: ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಹುಣಸಗಿ ತಾಲೂಕು ಘಟಕ 2026-2031ನೇ ಸಾಲಿನ ತಾಲೂಕು ಕಾರ್ಯಕಾರಿ ಸಮಿತಿ ಚುನಾವಣೆ ಫಲಿತಾಂಶ ಘೋಷಣೆ ಆಗಿದ್ದು, ಮಹಿಳಾ ಪ್ರತಿನಿಧಿ -2, ಪುರುಷ ಪ್ರತಿನಿಧಿ -4 ಸೇರಿದಂತೆ ಒಟ್ಟು 6 ಸ್ಥಾನಗಳಿಗೆ ಚುನಾವಣೆ ನಡೆದಿದ್ದು, ಮಹಿಳಾ ಸ್ಥಾನಕ್ಕೆ ಅಕ್ಕಮಹಾದೇವಿ ಹಾದಿಮನಿ 157 ಮತಗಳ ಪಡೆದು ಪ್ರಥಮ ಸ್ಥಾನ, ಶೋಭಾ ನಾಯ್ಕೋಡಿ 122 ಮತಗಳನ್ನು ಪಡೆದು ದ್ವಿತೀಯ ಸ್ಥಾನದಲ್ಲಿ ಆಯ್ಕೆಯಾಗಿದ್ದಾರೆ. ಪುರುಷರಲ್ಲಿ ಗುರುನಾಥ ರಾಠೋಡ 139 ಮತಗಳು, ಹಾಜಿ ಮಲಂಗ್ 111 ಮತಗಳು, ಸುರೇಶ ಹಾದಿಮನಿ 100 ಮತಗಳು, ಪ್ರಕಾಶ ಬಡಿಗೇರ 91 ಮತಗಳನ್ನು ಪಡೆದು ಎಲ್ಲ ಅಭ್ಯರ್ಥಿಗಳು ಬಹುಮತದಿಂದ ಆಯ್ಕೆಯಾಗಿದ್ದಾರೆ.

ಪುರುಷ ಅಭ್ಯರ್ಥಿಗಳು 16, ಮಹಿಳಾ ಅಭ್ಯರ್ಥಿಗಳು 4 ಸೇರಿದಂತೆ ಒಟ್ಟು 20 ಅಭ್ಯರ್ಥಿಗಳು ಕಣದಲ್ಲಿದ್ದರು. ವಿಜೇತ ಅಭ್ಯರ್ಥಿಗಳಿಗೆ ಚುನಾವಣೆ ಅಧಿಕಾರಿ ಯಲ್ಲಪ್ಪ ಚಂದನಕೇರಿ ಉಪ ಚುನಾವಣೆ ಅಧಿಕಾರಿ ಬಸವರಾಜ ಕೋಳ್ಕೂರು ಪ್ರಮಾಣ ಪತ್ರ ವಿತರಿಸಿದರು.

ಈ ಸಂದರ್ಭದಲ್ಲಿ ಕೊಟ್ರೇಶ ಕೋಳೂರು, ಬಸವರಾಜ ತೆಗ್ಗೆಳ್ಳಿ, ನಾಗನಗೌಡ ಪಾಟೀಲ, ರವಿ ಕನಕರೆಡ್ಡಿ, ವೀರನಗೌಡ ಪಾಟೀಲ, ಗುರುನಾಥ ಹುಲಕಲ್, ಭೀಮಣ್ಣ ವಾಲ್ಮೀಕಿ, ಷಣ್ಮುಕಪ್ಪ ನುಚ್ಚಿ, ಕಾಂತೇಶ ಹಲಗಿಮನಿ, ಶಿವಾನಂದ ತೋಟದ, ನಿಂಗನಗೌಡ ಪಾಟೀಲ, ರಂಗಯ್ಯ ಗುತ್ತೇದಾರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಎಸ್ಸೆಸ್ಸೆಲ್ಸಿ, ಪಿಯುಸಿ ಸಾಧಕರಿಗೆ ಡಿಸಿ ಹರ್ಷಲ್ ಭೋಯರ್‌ರಿಂದ ಸನ್ಮಾನ

ವಿದ್ಯಾರ್ಥಿಗಳ ಈ ಸಾಧನೆ ಇತರರಿಗೆ ಮಾದರಿ: ಡಿಸಿ



ಯಾದಗಿರಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ಎಸ್ಸೆಸ್ಸೆಲ್ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಸನ್ಮಾನಿಸಿದರು.

ಸುರಪುರ: 2026ನೇ ಸಾಲಿನ ಎಸ್ಸೆಸ್ಸೆಲ್ಸಿ ಮತ್ತು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳಲ್ಲಿ ಸುರಪುರದ ಶರಣಬಸವ ವಸತಿ ಸಾರ್ವಜನಿಕ ಶಾಲೆ ಹಾಗೂ ಸ್ವತಂತ್ರ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಅಮೋಘ ಸಾಧನೆ ಮಾಡಿ ತಾಲೂಕಿನ ಪ್ರಥಮ ಸ್ಥಾನ ಪಡೆದು ಜಿಲ್ಲೆಗೆ ಕೀರ್ತಿ ತಂದಿದ್ದಕ್ಕಾಗಿ, ಜಿಲ್ಲಾಧಿಕಾರಿ ಹರ್ಷಲ್ ಭೋಯರ್‌ಅವರು ತಮ್ಮ ಕಚೇರಿಯಲ್ಲಿ ಸಾಧಕ ವಿದ್ಯಾರ್ಥಿಗಳನ್ನು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳ ಈ ಸಾಧನೆ ಇತರರಿಗೆ ಮಾದರಿಯಾಗಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟೂ ಸಾಧನೆ ಮಾಡಿ ಸಮಾಜಕ್ಕೆ ಕೊಡುಗೆ ನೀಡುವಂತಾಗಲಿ ಎಂದು ಪ್ರೇರೇಪಿಸಿದರು. ಶಾಲೆಯ ಆಡಳಿತ ಮಂಡಳಿ, ಪ್ರಾಚಾರ್ಯರು ಹಾಗೂ ಶಿಕ್ಷಕ ವೃಂದ ವಿದ್ಯಾರ್ಥಿಗಳ ಸಾಧನೆಗೆ ಸಂತೋಷ ವ್ಯಕ್ತಪಡಿಸಿದ್ದಾರೆ.

ಎಸ್ಸೆಸ್ಸೆಲ್ಸಿ ವಿಭಾಗದಲ್ಲಿ ಸಮರ್ಥ ತಂದೆ ಮನೀಶ ಮತ್ತು ಮೋನಿಕಾ ತಂದೆ ಗಣೇಶ ತಾಲೂಕಿಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಪಿಯುಸಿ ವಿಜ್ಞಾನ ವಿಭಾಗದಲ್ಲಿ ಶ್ವೇತಾ ತಂದೆ ಹನುಮಂತ ಟಾಪರ್‌ಆಗಿ ಹೊರಹೊಮ್ಮಿದರೆ, ವಾಣಿಜ್ಯ ವಿಭಾಗದಲ್ಲಿ ಸೌಮ್ಯ ತಂದೆ ರಾಘವೇಂದ್ರ ಅತ್ಯುತ್ತಮ ಸಾಧನೆ ಮಾಡಿದ್ದಾರೆ.

ಈ ಸನ್ಮಾನ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಜಂಟಿ ಕಾರ್ಯದರ್ಶಿಗಳಾದ ದೊಡ್ಡಪ್ಪ ಎಸ್.ನಿಷ್ಠಿ ಮಾತನಾಡಿ, ವಿದ್ಯಾರ್ಥಿಗಳ ಪರಿಶ್ರಮ ಮತ್ತು ನಿಷ್ಠೆಯನ್ನು ಶ್ಲಾಘಿಸಿದರು. ಇದೇ ರೀತಿಯ ಶ್ರಮವನ್ನು ಮುಂದಿನ ಉನ್ನತ ವಿದ್ಯಾಭ್ಯಾಸದಲ್ಲೂ ಮುಂದುವರಿಸಬೇಕು ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ವೀರಪ್ಪ ನಿಷ್ಠಿ ತಾಂತ್ರಿಕ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ.ಶರಣಬಸಪ್ಪಸಾಲಿ ಹಾಗೂ ವಿವಿಧ ವಿಭಾಗಗಳ ಪ್ರಾಚಾರ್ಯರಾದ ಪ್ರೊ.ನಾನಗೌಡ ದೇಸಾಯಿ, ಪ್ರೊ. ವಿವೇಕ ಗಂಜಿ, ಪ್ರೊ. ರೇವಪ್ಪ ಪಾಟೀಲ್ ಸೇರಿದಂತೆ ವಿದ್ಯಾರ್ಥಿಗಳ ಪೋಷಕರು ಉಪಸ್ಥಿತರಿದ್ದರು.